ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂ:ಕಾಶಿಇ/171/ತಾ.ಪ್ರಾ.ನೇ./ಖಾಕಾ/2014-15/ನೇಪಾವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:12.09.2014.

ಇವರಿಗೆ,

ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ,
ಕಾಲೇಜು ಶಿಕ್ಷಣ ಇಲಾಖೆ,
ಬೆಂಗಳೂರು / ಮೈಸೂರು / ಮಂಗಳೂರು /
ಶಿವಮೊಗ್ಗ / ಧಾರವಾಡ / ಗುಲಬರ್ಗಾ

ಮಾನ್ಯರೆ,

ವಿಷಯ: ಇಲಾಖೆ ವ್ಯಾಪ್ತಿಯ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಯಂ ಪ್ರಾಂಶುಪಾಲರನ್ನು ನೇಮಕಾತಿ ಮಾಡುವವರೆಗೆ ತಾತ್ಕಾಲಿಕ ಪ್ರಾಂಶುಪಾಲರ ನೇಮಕಾತಿ ಮಾಡಿಕೊಳ್ಳುವ ಬಗ್ಗೆ

ಉಲ್ಲೇಖ: ದಿನಾಂಕ:24.12.2009 ರ ಸರ್ಕಾರಿ ಆದೇಶ ಸಂಖ್ಯೆ: ಇಡಿ/37/ ಯುಎನ್ಇ/2009.

******

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ಪರಿಷ್ಕೃತ 2006 ರ ಯುಜಿಸಿ ವೇತನ ಶ್ರೇಣಿಗಳನ್ನು ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರುಗಳಿಗೆ ವಿಸ್ತರಿಸಲಾಗಿದ್ದು, ಸದರಿ ಸರ್ಕಾರಿ ಆದೇಶದಲ್ಲಿ ಯುಜಿಸಿ ಮಾರ್ಗಸೂಚಿಗಳಂತೆ ಖಾಯಂ ಪ್ರಾಂಶುಪಾಲರ ನೇಮಕಾತಿಗೆ ಅರ್ಹತೆಗಳನ್ನು ನಿಗದಿಪಡಿಸಲಾಗಿರುತ್ತದೆ. ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಗ್ರೇಡ್-I ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಸೂಚನೆ ನೀಡಲಾಗಿದ್ದು, ಇದರಿಂದಾಗಿ ಸದರಿ ಹುದ್ದೆಗಳನ್ನು ಸೃಜಿಸಬೇಕಾಗಿರುತ್ತದೆ.

ಗ್ರೇಡ್-I ಪ್ರಾಂಶುಪಾಲರ ಹುದ್ದೆಗಳನ್ನು ಸೃಜಿಸುವ ಹಾಗೂ ಅವುಗಳನ್ನು ಭರ್ತಿ ಮಾಡುವವರೆಗೂ ಆಡಳಿತಾತ್ಮಕ ನಿರ್ವಹಣೆಗಾಗಿ ಆಡಳಿತ ಮಂಡಳಿಗಳು ತಾತ್ಕಾಲಿಕವಾಗಿ ಬೋಧಕರನ್ನು ಪ್ರಾಂಶುಪಾಲರನ್ನಾಗಿ ನೇಮಕ ಮಾಡಿಕೊಳ್ಳುತ್ತಿದ್ದಾರೆ. ಅದರೆ ಕೆಲವು ಸಂದರ್ಭಗಳಲ್ಲಿ ಆಡಳಿತ ಮಂಡಳಿಗಳು ಜ್ಯೇಷ್ಠತೆಯನ್ನು ಹಾಗೂ ಪಿಹೆಚ್.ಡಿ. ವಿದ್ಯಾರ್ಹತೆಯನ್ನು ಹೊಂದದೇ ಇರುವ ಬೋಧಕರನ್ನು ಪ್ರಾಂಶುಪಾಲರ ಕರ್ತವ್ಯ ನಿರ್ವಹಿಸುವಂತೆ ಸೂಚಿಸಿದ್ದು, ಇದರಿಂದಾಗಿ ಪಿಹೆಚ್.ಡಿ. ಪದವಿಯೊಂದಿಗೆ ಸೇವಾ ಜ್ಯೇಷ್ಠತೆಯನ್ನು ಹೊಂದಿರುವ ಬೋಧಕರುಗಳು ನ್ಯಾಯಾಲಯ/ಸರ್ಕಾರದ ಮೊರೆ ಹೋಗುತ್ತಿರುವ ಪ್ರಸಂಗಗಳನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಆದ್ದರಿಂದ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಯಂ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವವರೆವಿಗೂ, ಆಡಳಿತ ಮಂಡಳಿಯು ತಾತ್ಕಾಲಿಕವಾಗಿ ಬೋಧಕರನ್ನು ಪ್ರಾಂಶುಪಾಲರ

ಕರ್ತವ್ಯ ನಿರ್ವಹಿಸಲು ನಿಯೋಜಿಸುವ ಸಂದರ್ಭದಲ್ಲಿ ಈ ಕೆಳಕಂಡ ಸೂಚನೆಗಳನ್ನು ಪಾಲಿಸಲು ತಿಳಿಸಲಾಗಿದೆ.

1. ಪಿಹೆಚ್.ಡಿ. ಪದವಿಯನ್ನು ಹೊಂದಿ ಸೇವಾ ಜ್ಯೇಷ್ಠತೆ ಹೊಂದಿರುವ ಬೋಧಕರನ್ನು ಪ್ರಾಂಶುಪಾಲರ ಹುದ್ದೆಯ ಕರ್ತವ್ಯವನ್ನು ನಿರ್ವಹಿಸಲು ಸೂಚಿಸತಕ್ಕದ್ದು.

2. ಸರ್ಕಾರದ ಆದೇಶ ಸಂಖ್ಯೆ: ಇಡಿ/37/ಯುಎನ್ಇ/2009, ದಿನಾಂಕ: 24.12.2009 ರಲ್ಲಿ ಪ್ರಾಂಶುಪಾಲರ ಹುದ್ದೆ ಭರ್ತಿಗೆ ಸಂಬಂಧಿಸಿದಂತೆ, ನಿಗದಿ ಪಡಿಸಲಾದ ಅರ್ಹತೆಗಳನ್ನು ಪೂರೈಸಿರುವ ಬೋಧಕರನ್ನು ಮಾತ್ರ ಪ್ರಾಂಶುಪಾಲರ ಕರ್ತವ್ಯ ನಿರ್ವಹಿಸಲು ಪರಿಗಣಿಸತಕ್ಕದ್ದು.

3. ಕಾಲಕಾಲಕ್ಕೆ ಸರ್ಕಾರ ಹಾಗೂ ಇಲಾಖೆ ನೀಡುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ತಪ್ಪಿದಲ್ಲಿ ಆಡಳಿತ ಮಂಡಳಿಯ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

4. ಆಡಳಿತ ಮಂಡಳಿಗಳು ನಿಯಮಾನುಸಾರ ನೇಮಕ ಮಾಡಿಕೊಳ್ಳುವ ಪ್ರಾಂಶುಪಾಲರುಗಳಿಗೆ ಇಲಾಖೆ/ಸರ್ಕಾರದಿಂದ ಯಾವುದೇ ಹೆಚ್ಚುವರಿಯಾಗಿ ಆರ್ಥಿಕ ಸೌಲಭ್ಯ ನೀಡಲಾಗುವುದಿಲ್ಲ.

ತಮ್ಮ ವಿಶ್ವಾಸಿ,

"ಉಪ್ಪಡಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ."

ಕಾಲೇಜು ಶಿಕ್ಷಣ ನಿರ್ದೇಶಕರು.